# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಹಂತ-8 ಬ್ಯಾಚ್-Iರ ಪ್ಯಾಕೇಜ್ ಸಂಖ್ಯೆ:ಕೆಎನ್-21-36 ಕ್ಕೆ ಸಂಬಂಧಿಸಿದ ಕಾಮಗಾರಿಯಲ್ಲಿ ಉದ್ಭವಿಸಿರುವ ತಕರಾರು ವಿಷಯವನ್ನು ಪರಿಹರಿಸಲು ಅಧಿಕಾರಯುಕ್ತ ಸ್ಥಾಯಿ ಸಮಿತಿಯನ್ನು (Standing Empowered Committee) ರಚಿಸುವ ಕುರಿತು.

ಓದಲಾಗಿದೆ: SBD ಕ್ಲಾಸ್ ಕಂಡಿಕೆ 24.3ರನ್ವಯ.

**ಪ್ರಸ್ತಾವನೆ:**

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಹಂತ-8 ಬ್ಯಾಚ್-Iರ ಪ್ಯಾಕೇಜ್ ಸಂಖ್ಯೆ:ಕೆಎನ್-21-36ರ ಕಾಮಗಾರಿಯನ್ನು ಶ್ರೀ ಎಂ.ಜಿ. ಶಿವಶಂಕರಸ್ವಾಮಿ, ಗುತ್ತಿಗೆದಾರರಿಗೆ ಟೆಂಡರ್ ಆಧಾರದ ಮೇಲೆ ವಹಿಸಲಾಗಿತ್ತು. ಪ್ಯಾಕೇಜ್ ಸಂಖ್ಯೆ:21-36 ಕಾಮಗಾರಿಯನ್ನು ದಿನಾಂಕ:24-3-2009 ರಂದು ಪ್ರಾರಂಭಿಸಿ ದಿನಾಂಕ:23-12-2009ರೊಳಗೆ ಪೂರ್ಣಗೊಳಿಸಬೇಕಾಗಿತ್ತು. ಗುತ್ತಿಗೆದಾರರು ಪ್ರಗತಿ ನೀಡಲು ವಿಫಲರಾದ ಕಾರಣ ಸದರಿ ಗುತ್ತಿಗೆಯನ್ನು ದಿನಾಂಕ:25-3-2013ರಲ್ಲಿ ರದ್ದುಪಡಿಸಲಾಗಿರುತ್ತದೆ. ಗುತ್ತಿಗೆದಾರರು ವಿವಿಧ ಕಾರಣಗಳ ನಿಮಿತ್ತ ಕಾಮಗಾರಿ ಪೂರ್ಣಗೊಳಿಸಲು ಸಾಧ್ಯವಾಗಲಿಲ್ಲವೆಂದು ಮತ್ತೊಂದು ಅವಕಾಶ ನೀಡಬೇಕೆಂದು ಕೋರಿರುತ್ತಾರೆ. ಸದರಿ ಕಾಮಗಾರಿಯ ವಿವಾದವನ್ನು ಇತ್ಯರ್ಥಗೊಳಿಸಲು ಟೆಂಡರ್ ನಿಯಮ 24.3 ರನ್ವಯ ಅಧಿಕಾರಯುಕ್ತ ಸ್ಥಾಯಿ ಸಮಿತಿಯನ್ನು ರಚಿಸಬೇಕಾಗಿರುತ್ತದೆ. ಅದರಂತೆ ಈ ಅದೇಶ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ:28:ಆರ್‌ಆರ್‌ಸಿ:2013(ಭಾ-2), ಬೆಂಗಳೂರು, ದಿನಾಂಕ:18-4-2015.**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಟೆಂಡರ್ ಕರಾರಿನಲ್ಲಿ ನಿಯಮಾವಳಿಯಲ್ಲಿರುವ ಅವಕಾಶದಂತೆ, ವಿವಾದವನ್ನು ಬಗೆಹರಿಸಲು ಅಧಿಕಾರಯುಕ್ತ ಸ್ಥಾಯಿ ಸಮಿತಿ (Standing Empowered Committee) ಯನ್ನು ರಚಿಸಲಾಗಿದ್ದು, ಸಮಿತಿಗೆ ಈ ಕೆಳಕಂಡಂತೆ ಅಧ್ಯಕ್ಷರು ಹಾಗೂ ಸದಸ್ಯರ ನಾಮ ನಿರ್ದೇಶನ ಮಾಡಿ ಆದೇಶ ಹೊರಡಿಸಿದೆ.

**ವಿವರಗಳು**

| | | |
|---|---|---|
| 1 | ಅಧ್ಯಕ್ಷರು | ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ |
| 2 | ಸದಸ್ಯರು | ನಿರ್ದೇಶಕರು, ಸುವರ್ಣ ಗ್ರಾಮೋದಯ ಯೋಜನೆ , ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ |
| 3 | ಸದಸ್ಯರು | ಮುಖ್ಯ ಇಂಜಿನಿಯರ್, ಪಂ.ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು |
| 4 | ಸದಸ್ಯರು | ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ |

| | | |
|---|---|---|
| 5 | ಸದಸ್ಯರು | ಮೃತ್ಯುಂಜಯ, ನಿವೃತ್ತ ಮುಖ್ಯ ಅಭಿಯಂತರರು (ಗುತ್ತಿಗೆದಾರರ ಕೋರಿಕೆಯಂತೆ) |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

18/4/15

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಗ್ರಾಮೀಣ ಮೂಲಭೂತ ಸೌಲಭ್ಯಗಳು ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲಕರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲಕರು (ಆಡಿಟ್–1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲಕರು (ಆಡಿಟ್–2), ಕರ್ನಾಟಕ, ಬೆಂಗಳೂರು.
4. ಮಾನ್ಯ ಗ್ರಾ.ಅ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು.
7. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು–9
8. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು–9.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
10. ಮಾಹಿತಿ ಕೇಂದ್ರಕ್ಕೆ/ ಹೆಚ್ಚುವರಿ ಪ್ರತಿಗಳು.